## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕೇಂದ್ರ ಕಛೇರಿ: ಬೆಂಗಳೂರು

## " ಪತ್ರಿಕಾ ಪ್ರಕಟಣೆ "

2018-19 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಪದವಿಪೂರ್ವ ಶಿಕ್ಷಣ ಇಲಾಖೆಯು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 02.05.2018 ರಿಂದ ತರಗತಿಗಳನ್ನು ಪ್ರಾರಂಭಿಸಿರುತ್ತದೆ. ಕರಾರಸಾನಿಗಮವು ಪ್ರತಿ ವರ್ಷದಂತೆ ಜೂನ್ ತಿಂಗಳಿನಿಂದ ನೂತನ ಶೈಕ್ಷಣಿಕ ವರ್ಷದ ಬಸ್ ಪಾಸ್ ವಿತರಿಸಲಿದ್ದು ಅಲ್ಲಿಯವರೆಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ನಿಗಮದ ಬಸ್ಸುಗಳಲ್ಲಿ ಪ್ರಯಾಣಿಸಲು ಅನುಕೂಲವಾಗುವಂತೆ ಈ ಕೆಳಕಂಡ ಕ್ರಮ ಕೈಗೊಂಡಿರುತ್ತದೆ.

**2017-18ನೇ ಸಾಲಿನಲ್ಲಿ ಪ್ರಥಮ ಪಿಯುಸಿ ಅಭ್ಯಸಿಸಲು ಪಾಸುಗಳನ್ನು ಪಡೆದಿರುವ ವಿದ್ಯಾರ್ಥಿಗಳು 2018-19ನೇ ಶೈಕ್ಷಣಿಕ ವರ್ಷದ ಬಸ್ ಪಾಸ್ ವಿತರಿಸುವವರೆಗೆ, ನಿಗಮದ ಬಸ್ಸುಗಳಲ್ಲಿ, ಪಾಸಿನಲ್ಲಿ ನಮೂದಿಸಿರುವ ಮಾರ್ಗದಲ್ಲಿ (ವಾಸಸ್ಥಳ ಹಾಗೂ ಕಾಲೇಜಿನ ನಡುವೆ) ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡಲಾಗಿದೆ.**

2ನೇ ಪಿಯುಸಿ ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕಾಗಿ ಕೋರಲಾಗಿದೆ.

**ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ) (ಪ್ರ)**